## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ವರ್ಲ್ಡ್ ಕಲ್ಚರ್ ಸಂಸ್ಥೆಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:
1. ಗೌರವ ಕಾರ್ಯದರ್ಶಿ, ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ವರ್ಲ್ಡ್ ಕಲ್ಚರ್‌ಇವರ ಪತ್ರದ ದಿನಾಂಕ:16-09-2019.
2. ಮಾನ್ಯ ಮುಖ್ಯಮಂತ್ರಿಯವರ ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ ಇವರ ಪತ್ರ ಸಂಖ್ಯೆ: ಮುಮವಿಕಾ/ಗೃಕ/145/2019, ದಿನಾಂಕ:31-12-2019.
3. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರ ಏಕಕಡತ ಸಂಖ್ಯೆ: DKC/33011/95/2020, ದಿನಾಂಕ: 22-07-2020.

ಪ್ರಸ್ತಾವನೆ:

ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ವರ್ಲ್ಡ್ ಕಲ್ಚರ್ ಸಂಸ್ಥೆಯನ್ನು ಶ್ರೀ.ಬಿ.ಪಿ.ವಾಡಿಯಾ ಇವರು 1945ರಲ್ಲಿ ಸ್ಥಾಪಿಸಿದರು. ಈ ಸಂಸ್ಥೆಯು ಅಂದಿನಿಂದ ಸಕ್ರಿಯವಾಗಿ ವಿಶ್ವ ಸಂಸ್ಕೃತಿ, ಜ್ಞಾನಪ್ರಸಾರ ಮತ್ತು ಕಲಾ ಚಟುವಟಿಕೆಗಳ ನೆಲೆಯಾಗಿ ಬಸವನಗುಡಿ ಸಾಂಸ್ಕೃತಿಕ ಗುರುತಾಗಿ ಕಾರ್ಯನಿರ್ವಹಿಸುತ್ತಿದೆ. ಕರ್ನಾಟಕ ಸರ್ಕಾರದ ವತಿಯಿಂದ ವರ್ಲ್ಡ್ ಕಲ್ಚರ್ ಅಮೃತ ಮಹೋತ್ಸವ ಸಂಸ್ಕರಣೆ ವಿಶೇಷ ಸಂದರ್ಭದಲ್ಲಿ ವಿವಿಧ ಯೋಜನೆಗಳ ಅನುಷ್ಠಾನಕ್ಕಾಗಿ ಐದು ಕೋಟಿ ರೂಪಾಯಿಗಳ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿ ಸಂಸ್ಥೆಯ ಗೌರವ ಕಾರ್ಯದರ್ಶಿಯವರು ಮೇಲೆ ಓದಲಾದ (1)ರ ಮನವಿಯಲ್ಲಿ ಮಾನ್ಯ ಮುಖ್ಯಮಂತ್ರಿಯವರನ್ನು ಕೋರಿರುತ್ತಾರೆ.

ಮೇಲೆ ಓದಲಾದ(2)ರ ಟಿಪ್ಪಣಿಯಲ್ಲಿ ಮಾನ್ಯ ಮುಖ್ಯಮಂತ್ರಿಯವರು ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ವರ್ಲ್ಡ್ ಕಲ್ಚರ್ ಸಂಸ್ಥೆಗೆ ರೂ.5.00 ಕೋಟಿಗಳ ಅನುದಾನ ಕೂಡಲೇ ಬಿಡುಗಡೆ ಮಾಡಲು ಆದೇಶಿಸಿರುವ ಹಿನ್ನೆಲೆಯಲ್ಲಿ, 2020-21ನೇ ಸಾಲಿನ ಕ್ರಿಯಾ ಯೋಜನೆಯು ಅನುಮೋದನೆ ಆಗಿರುವುದಿಲ್ಲ ಹಾಗೂ ಪ್ರಸಕ್ತ ಸಾಲಿನ ಕ್ರಿಯಾಯೋಜನೆಯಲ್ಲಿ ಇಂಡಿಯನ್ ಇನ್ಸ್ಟಿಟ್ಯೂಟ್‌ಆಫ್ ವರ್ಲ್ಡ್ ಕಲ್ಚರ್ ಸಂಸ್ಥೆಗೆ ರೂ.5.00 ಕೋಟಿ ಅನುದಾನ ಅವಕಾಶ ಮಾಡಿಕೊಂಡಿರುವುದಿಲ್ಲವಾದ್ದರಿಂದ, ಈ ಬಗ್ಗೆ ಸರ್ಕಾರದ ಹಂತದಲ್ಲಿ ತೀರ್ಮಾನಿಸಿ ಹೆಚ್ಚುವರಿಯಾಗಿ ರೂ.5.00ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಿ ಆದೇಶ ಹೊರಡಿಸಲು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರು ಮೇಲೆ ಓದಲಾದ(3)ರ ಏಕಕಡತದಲ್ಲಿ ಕೋರಿರುತ್ತಾರೆ.

ಆರ್ಥಿಕ ಇಲಾಖೆಯು ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ವರ್ಲ್ಡ್ ಕಲ್ಚರ್ ಸಂಸ್ಥೆಗೆ ಪ್ರಸ್ತುತ ಇಲಾಖೆಯಲ್ಲಿ ಲಭ್ಯವಿರುವ ಅನುದಾನದಿಂದ ರೂ.5.00ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡುವಂತೆ ತಿಳಿಸಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಸಂವಾ 65 ಕಸಧ 2020, ಬೆಂಗಳೂರು, ದಿನಾಂಕ:29-07-2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ವರ್ಲ್ಡ್ ಕಲ್ಚರ್ ಬೆಂಗಳೂರು ಇವರಿಗೆ ರೂ.5.00ಕೋಟಿ (ರೂಪಾಯಿ ಐದು ಕೋಟಿಗಳು ಮಾತ್ರ) ಗಳನ್ನು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು, ಇವರ ಮುಖಾಂತರ ಬಿಡುಗಡೆ ಮಾಡಲು ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಮಂಜೂರಾತಿ ನೀಡಿದೆ.

9. ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸುಇ (ಸೇವಾ ನಿಯಮಗಳು-1), ವಿಧಾನಸೌಧ, ಬೆಂಗಳೂರು
10. ಸಂಬಂಧಿಸಿದ ಅಧಿಕಾರಿಯವರಿಗೆ (ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಮುಖಾಂತರ)
11. ಸರ್ಕಾರದ ಕಾರ್ಯದರ್ಶಿಯವರ ಆಪ್ತಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಕಾಸಸೌಧ, ಬೆಂಗಳೂರು
12. ಸರ್ಕಾರದ ಉಪಕಾರ್ಯದರ್ಶಿಯವರ ಆಪ್ತಸಹಾಯಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಕಾಸಸೌಧ, ಬೆಂಗಳೂರು
13. ಶಾಖಾ ರಕ್ಷಾ ಕಡತ/ ಸಮನ್ವಯ ಶಾಖೆ/ ಹೆಚ್ಚುವರಿ ಪ್ರತಿಗಳು